ಕರ್ನಾಟಕ ಸರ್ಕಾರ

ಸಂಖ್ಯೆ:ನಅಇ 60 ಮೈಅಪ್ರಾ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 18.06.2019.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ:
ಆಯುಕ್ತರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು.

ಮಾನ್ಯರೆ,

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ವ್ಯಾಪ್ತಿಯಲ್ಲಿನ ಜಮೀನುಗಳಿಗೆ ಕೆ.ಟಿ.ಸಿ.ಪಿ. ಕಾಯ್ದೆ 1961ರ ಕಲಂ 17ರನ್ವಯ ವಿನ್ಯಾಸ ನಕ್ಷೆ ಅನುಮೋದನೆ ಪಡೆದ ನಂತರ ಪಾಲಿಕೆಯಲ್ಲಿ ಖಾತೆ ತೆರೆಯುವ ಬಗ್ಗೆ.

ಉಲ್ಲೇಖ: 1) ಸದಸ್ಯ ಕಾರ್ಯದರ್ಶಿಗಳು (ಪ್ರ), ಬಿ.ಎಂ.ಐ.ಸಿ.ಎ.ಪಿ.ಎ, ಬೆಂಗಳೂರು ಇವರ ಪತ್ರ ಸಂಖ್ಯೆ: ಬಿಎಂಐಸಿಎಪಿಎ /ಕ.ನ.ಮಂ/07/2015-16/465, ದಿನಾಂಕ: 18.07.2018.

2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಸಿಪಿ/158/ಎಂಐಎಸ್‌ಸಿ/2018-19, ದಿನಾಂಕ: 22.10.2018.

~*~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದಲ್ಲಿ ಬಿ.ಎಂ.ಐ.ಸಿ.ಎ.ಪಿ ಪ್ರಾಧಿಕಾರವು ತಮ್ಮ ವ್ಯಾಪ್ತಿಯಲ್ಲಿ ಬರುವ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17ರನ್ವಯ ವಿನ್ಯಾಸ ನಕ್ಷೆ ಅನುಮೋದನೆ ಇಲ್ಲದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಖಾತೆ ತೆರೆಯುತಿದ್ದು ಈ ಕುರಿತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸರ್ಕಾರದಿಂದ ಸೂಕ್ತ ನಿರ್ದೇಶನ ನೀಡಲು ಪ್ರಸ್ತಾವನೆ ಸಲ್ಲಿಸುವಂತೆ ಕೋರಿರುತ್ತಾರೆ. ಉಲ್ಲೇಖ (2)ರನ್ವಯ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರು ಭೂ ಪರಿವರ್ತನೆಯಾದ ಜಮೀನುಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆಗೆ ಅನುಮೋದನೆಯಾಗದೇ ನಿವೇಶನಗಳಿಗೆ ಖಾತೆ ತೆರೆಯಬಾರದೆಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿರ್ದೇಶನ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸದಸ್ಯ ಕಾರ್ಯದರ್ಶಿಗಳು, ಬಿ.ಎಂ.ಐ.ಸಿ.ಎ.ಪಿ.ಎ ಮತ್ತು ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿದೆ. ಕರ್ನಾಟಕ ಮುನ್ಸಿಪಲ್ ಕಾರ್ಪೋರೇಷನ್ ಕಾಯ್ದೆ 1976ರ ಕಲಂ 505ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರಡಿಯಲ್ಲಿ ಅನುಮೋದನೆ ಪಡೆಯದೇ ಯಾವುದೇ ರೀತಿಯ ಅಭಿವೃದ್ಧಿಗಳಿಗೆ ಅನುಮೋದನೆ ನೀಡಬಾರದೆಂದು ಸ್ಪಷ್ಟವಾದ ಉಲ್ಲೇಖವಿರುತ್ತದೆ.

ಅಲ್ಲದೇ, ಕರ್ನಾಟಕ ಮುನ್ಸಿಪಲ್ ಕಾರ್ಪೋರೇಷನ್ ಕಾಯ್ದೆ 1976ರ ಕಲಂ 112ಸಿ(1)(ii) ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ರಡಿಯಲ್ಲಿ ವಿನ್ಯಾಸ ಅನುಮೋದನೆ ಪಡೆಯದೇ ವಿಂಗಡಿಸಿರುವ ನಿವೇಶನಗಳನ್ನು ಅನಧಿಕೃತ ಎಂದು ಉಲ್ಲೇಖಿಸಲಾಗಿದೆ.

Received on

ಮೇಲೆ ವಿವರಿಸಿರುವ ಹಿನ್ನೆಲೆಯಲ್ಲಿ ಭೂ ಪರಿವರ್ತನೆಯಾದ ಜಮೀನುಗಳಿಗೆ ಸಕ್ಷಮ ಪ್ರಾಧಿಕಾರದಿಂದ ವಿನ್ಯಾಸ ನಕ್ಷೆಗೆ ಅನುಮೋದನೆಯಾಗದೇ ನಿವೇಶನಗಳಿಗೆ ಖಾತೆ ತೆರೆಯುವುದು ಕೆ.ಟಿ.ಸಿ.ಪಿ ಮತ್ತು ಇತರೆ ಕಾಯ್ದೆಗಳ ಉಲ್ಲಂಘನೆಯಾಗುವುದರಿಂದ, ಭೂ ಪರಿವರ್ತನೆಯಾದ ಜಮೀನುಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಆಗದೆ ನಿವೇಶನಗಳಿಗೆ ಖಾತೆ ತೆರೆಯಬಾರದೆಂದು ಈ ಮೂಲಕ ತಿಳಿಸಿದೆ ಹಾಗೂ ವಿವಿಧ ಯೋಜನಾ / ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಜಮೀನುಗಳಿಗೆ ಕೆ.ಟಿ.ಸಿ.ಪಿ ಕಾಯ್ದೆ 1961ರ ಕಲಂ 17ರಡಿಯಲ್ಲಿ ವಿನ್ಯಾಸ ಅನುಮೋದನೆ ಪಡೆದ ನಂತರವೇ ಖಾತೆ ಮಾಡಿ ಕಟ್ಟಡ ಕಟ್ಟಲು ಅನುಮತಿ / ಪರವಾನಿಗೆ ನೀಡಲು ಕ್ರಮವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಪ್ರತಿ:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸದಸ್ಯ ಕಾರ್ಯದರ್ಶಿ, ಬಿ.ಎಂ.ಐ.ಸಿ.ಎ.ಪಿ.ಎ, ನಂ.5, 2ನೇ ಮಹಡಿ, ಲೂಪ್‌ಲೇನ್, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
3. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರುಗಳು / ನಗರಾಭಿವೃದ್ಧಿ ಪ್ರಾಧಿಕಾರಗಳ ಆಯುಕ್ತರು ಮತ್ತು ಎಲ್ಲಾ ಸ್ಥಳೀಯ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಿಗೆ- ಮಾಹಿತಿಗಾಗಿ.

ಸಂಖ್ಯೆ: ನಗ್ರಾಯೋ:ಜಂನಿ:08:CIRC:2019-20
ಸರ್ಕಾರದ ಪತ್ರ ಸಂಖ್ಯೆ:ನಅಇ 60 ಮೈಅಪ್ರಾ 2019, ಬೆಂಗಳೂರು,
ದಿನಾಂಕ:18-06-2019.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 26 AUG 2019

**ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.**

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
5. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
6. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
7. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
8. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ತಾಂತ್ರಿಕ ವಿಭಾಗದ ಇ-ಮೇಲ್ ವಿಷಯ ನಿರ್ವಾಹಕರಿಗೆ.
11. ಹೆಚ್ಚುವರಿ ಪ್ರತಿಗಳು.

22/08/19
ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

9 NK(Suma)Circ